ಕರ್ನಾಟಕ ಸರ್ಕಾರ
ಹಿರಿಯ ಭೂವಿಜ್ಞಾನಿಯವರ ಕಛೇರಿ, ಅಂತರ್ಜಲ ಇಲಾಖೆ, ಬೆಂಗಳೂರು ವಿಭಾಗ,
13ನೇ ಮಹಡಿ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಡಾ: ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು–01.
**E-mail: bengaluru.gw@gmail.com, ದೂರವಾಣಿ: 080 – 22862108.**

---

ಸಂ: ಅಂ.ಇ/ಹಿಭೂವಿ/ಬೆಂ.ವಿ/ಕೊ.ಬಾ/2016–17/ ದಿ:14.11.2016.

14 NOV 2016

ರವರಿಗೆ:
ಉಪಮುಖ್ಯ ಅಭಿಯಂತರರು (ನಿ)–1
ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ
ಪ್ರಧಾನ ಅಭಿಯಂತರರ ಕಛೇರಿ, 2ನೇ ಮಹಡಿ,
ಕಾವೇರಿ ಭವನ, ಕೆ.ಜಿ. ರಸ್ತೆ,
**ಬೆಂಗಳೂರು –560 009.**

ಮಾನ್ಯರೇ,

ವಿಷಯ: ಮುಂಗಾರು ಮಳೆ ಕೊರತೆ ಹಿನ್ನೆಲೆಯಲ್ಲಿ ಕೊಳವೆ ಬಾವಿಗಳನ್ನು ಕೊರೆಯುವುದನ್ನು ತಡೆಗಟ್ಟುವ ಆದೇಶದ ಬಗ್ಗೆ.

ಉಲ್ಲೇಖ:1. ಸರ್ಕಾರಿ ಆದೇಶ ಸಂಖ್ಯೆ:ಆರ್.ಡಿ:267:ಟಿಎಸ್.ಆರ್:2016: ಬೆಂಗಳೂರು, ದಿ: 20.08.2016.
2. ಸರ್ಕಾರಿ ಆದೇಶ ಸಂಖ್ಯೆ:ಆರ್.ಡಿ:259:ಟಿಎಸ್.ಆರ್:2016: ಬೆಂಗಳೂರು, ದಿ: 25.10.2016.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯದಲ್ಲಿ ಪ್ರಸಕ್ತ 2016–17 ನೇ ಸಾಲು ಸೇರಿದಂತೆ ಹಿಂದಿನ 05 ವರ್ಷಗಳ ತನಕ ಮಳೆ ಕೊರತೆಯಿಂದ ಅಂತರ್ಜಲ ಮಟ್ಟವು ತೀವ್ರವಾಗಿ ಕುಸಿದಿರುವ ಹಿನ್ನೆಲೆಯಲ್ಲಿ ಸರ್ಕಾರವು ಕುಡಿಯುವ ನೀರಿನ ಸಮಸ್ಯೆ ಉಂಟಾಗುವುದನ್ನು ನಿವಾರಿಸಲು ಹೊಸ ಕೊಳವೆ ಬಾವಿಗಳನ್ನು ಕೊರೆಯುವುದನ್ನು ತಡೆಗಟ್ಟಿ ಉಲ್ಲೆಖಿತ ಪತ್ರಗಳಲ್ಲಿ ಸರ್ಕಾರವು ಆದೇಶಿಸಿರುತ್ತದೆ. ಸರ್ಕಾರದ ಆದೇಶದಂತೆ ಈ ಕಛೇರಿಯಿಂದ ವೈಯಕ್ತಿಕ ಕುಡಿಯುವ ನೀರಿಗಾಗಿ ಸ್ವೀಕೃತಗೊಂಡಿರುವ ಕೊಳವೆ ಬಾವಿ ಅರ್ಜಿಗಳ ತಾಂತ್ರಿಕ ಸಲಹೆ ಅಥವಾ ಅನುಮತಿ ನೀಡುವುದನ್ನು ನಿಲ್ಲಿಸಲಾಗಿದೆ. ಸದರಿ ವಿಷಯವನ್ನು ತಮ್ಮ ಅವಗಾಹನೆಗೆ ಹಾಗೂ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.

ತಮ್ಮ ವಿಶ್ವಾಸಿ,

ಹಿರಿಯ ಭೂವಿಜ್ಞಾನಿ
ಅಂತರ್ಜಲ ಇಲಾಖೆ.
ಬೆಂಗಳೂರು ವಿಭಾಗ, ಬೆಂಗಳೂರು

**ಪ್ರತಿಯನ್ನು:**

1) ಪ್ರಧಾನ ಅಭಿಯಂತರರು, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಪ್ರಧಾನ ಅಭಿಯಂತರರ ಕಛೇರಿ, 2ನೇ ಮಹಡಿ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು –560 009.
2) ನಿರ್ದೇಶಕರು ಮತ್ತು ಸದಸ್ಯ ಕಾರ್ಯದರ್ಶಿಗಳು, ಕರ್ನಾಟಕ ಅಂತರ್ಜಲ ಪ್ರಾಧಿಕಾರ, ಗಣಿ ಮತ್ತು ಭೂವಿಜ್ಞಾನ ಇಲಾಖೆ, ಖನಿಜ ಭವನ, ಬೆಂಗಳೂರು.
3) ನಿರ್ದೇಶಕರು, ಅಂತರ್ಜಲ ನಿರ್ದೇಶನಾಲಯ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕುಡಿಯುವ ನೀರಿನ ಉದ್ದೇಶಕ್ಕಾಗಿ ಹಾಗೂ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಬೋರ್‌ವೆಲ್ ಕೊರೆಯಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 267 ಟಿಎನ್‌ಆರ್ 2016 ದಿನಾಂಕ:20.08.2016.

*****

ಪ್ರಸ್ತಾವನೆ:

ರಾಜ್ಯದಲ್ಲಿ ಸತತವಾಗಿ ಕಳೆದ 5 ವರ್ಷಗಳಿಂದ ಬರ ಪರಿಸ್ಥಿತಿ ಇದ್ದು, ಅಣೆಕಟ್ಟು ಮತ್ತು ಕೆರೆ ಕಟ್ಟೆಗಳಲ್ಲಿ ನೀರು ಕಡಿಮೆ ಇದ್ದುದ್ದರಿಂದ ಹಾಗೂ 2016-17ನೇ ಸಾಲಿನಲ್ಲಿ ಮುಂಗಾರು ಮಳೆ ನಿರೀಕ್ಷಿತ ಮಟ್ಟದಲ್ಲಿ ಬಾರದೇ ಇದ್ದುದ್ದರಿಂದ, ಅಂತರ್ಜಲ ಮಟ್ಟದ ಕುಸಿತವು ತೀವ್ರವಾಗಿರುತ್ತದೆ. ಆದುದರಿಂದ, ಮುಂದಿನ ದಿನಗಳಲ್ಲಿ ಅಂತರ್ಜಲ ಮಟ್ಟದ ಕುಸಿತದಿಂದಾಗಿ ಕುಡಿಯುವ ನೀರಿನ ಸಮಸ್ಯೆ ಉಂಟಾಗುವುದನ್ನು ನಿವಾರಿಸುವ ದೃಷ್ಟಿಯಿಂದ ಮೇಲೆ ಓದಲಾದ ಆದೇಶದಲ್ಲಿ ಹೊಸ ಬೋರ್‌ವೆಲ್‌ಗಳನ್ನು ಕೊರೆಯುವುದನ್ನು ತಡೆಗಟ್ಟಲು ಆದೇಶಿಸಲಾಗಿರುತ್ತದೆ.

ಹೀಗೆ ತಡೆಗಟ್ಟಲು ಆದೇಶಿಸಲಾಗಿರುವುದರಿಂದ ತೊಂದರೆ ಉಂಟಾಗಿದೆಯೆಂದು, ಸರ್ಕಾರದ ವಿವಿಧ ಇಲಾಖೆ/ನಿಗಮ/ಸಂಸ್ಥೆಗಳಿಂದ ಅನುಮೋದನೆಗೊಂಡ ಕುಡಿಯುವ ನೀರಿನ ಉದ್ದೇಶದ ಕಾಮಗಾರಿಗಳಿಗಾಗಿ ಹಾಗೂ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಹೊಸ ಬೋರ್‌ವೆಲ್‌ಗಳನ್ನು ಕೊರೆಯಲು ಅನುಮತಿ ನೀಡುವಂತೆ ಸಮಾಜ ಕಲ್ಯಾಣ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಇತರೆ ಇಲಾಖೆಗಳಿಂದ ಮತ್ತು ಜಿಲ್ಲಾಧಿಕಾರಿಯವರಿಂದ ಕೋರಿಕೆಗಳು ಬಂದಿರುತ್ತವೆ. ಈ ಕೋರಿಕೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ ಆರ್‌ಡಿ 259 ಟಿಎನ್‌ಆರ್ 2016, ಬೆಂಗಳೂರು, ದಿನಾಂಕ:25.10.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 267 ಟಿಎನ್‌ಆರ್ 2016 ದಿನಾಂಕ:20.08.2016ರಲ್ಲಿ ಹೊಸ ಬೋರ್‌ವೆಲ್ ಕೊರೆಯುವುದನ್ನು ತಡೆಗಟ್ಟಿದ ಆದೇಶವನ್ನು ಮಾರ್ಪಡಿಸಿ, ಸರ್ಕಾರದ ವಿವಿಧ ಇಲಾಖೆ/ನಿಗಮ/ಸಂಸ್ಥೆಗಳಿಂದ ಅನುಮೋದನೆಗೊಂಡ ಕುಡಿಯುವ ನೀರಿನ ಉದ್ದೇಶದ ಕಾಮಗಾರಿಗಳಿಗಾಗಿ ಹಾಗೂ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಹೊಸ ಬೋರ್‌ವೆಲ್‌ಗಳನ್ನು ಕೊರೆಯಲು ಮಾತ್ರ ಅನುಮತಿ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
(ಬಿ.ಎಸ್. ಶ್ರೀನಿವಾಸ್)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಕಂದಾಯ ಇಲಾಖೆ(ವಿ.ನಿ ಮತ್ತು ಸೇ-3)

ಇವರಿಗೆ,
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ- ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಬೇಕೆಂದು ಕೋರಿದೆ.

ಪ್ರತಿ:

1. ಪ್ರಾದೇಶಿಕ ಆಯುಕ್ತರು, ಬೆಂಗಳೂರು / ಮೈಸೂರು / ಬೆಳಗಾವಿ / ಕಲಬುರಗಿ ವಿಭಾಗಗಳು.
2. ಎಲ್ಲಾ ಜಿಲ್ಲಾಧಿಕಾರಿಗಳು.
3. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
4. ಎಲ್ಲಾ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು.

........2